ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಕುರಿತು

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

1149 (1346) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಯುತ್ತಿರುವ ಶಾಲಾ ಕಾಲೇಜುಗಳನ್ನು ಸಮಾಜ ಕಲ್ಯಾಣ ಇಲಾಖೆ ಸುಪರ್ದಿಗೆ ನೀಡಲು ಸರ್ಕಾರ ಯೋಚಿಸಿದೆಯೇ ; (ವಿವರಗಳನ್ನು ನೀಡುವುದು)

(ಆ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಶಿಕ್ಷಕರು ಸವಲತ್ತುಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವ ಎಲ್ಲಾ ಸವಲತ್ತುಗಳನ್ನು ಮೇಲ್ಕಂಡ ಎಲ್ಲಾ ಶಿಕ್ಷಕರುಗಳಿಗೆ ವಿಸ್ತರಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು ?